**<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಡಾ|| ಕೆ.ಗೋವಿಂದರಾಜ್ ಇವರು ನಿಯಮ-330ರಡಿಯಲ್ಲಿ ಸಲ್ಲಿಸಿರುವ ಸೂಚನೆಗೆ ಉತ್ತರ</u>**

**<u>ಸೂಚನೆ:</u>**

**ಅಂತರಾಷ್ಟ್ರೀಯ ಮಟ್ಟದಲ್ಲಿನ ಬೆಂಗಳೂರು ನಗರದ ಜನಸಂಖ್ಯೆ ದಿನೇ ದಿನೇ ಹೆಚ್ಚುತ್ತಿದ್ದು, ಈ ಬೆಳವಣಿಗೆಯನ್ನು ಗಮನದಲ್ಲಿರಿಸಿಕೊಂಡು ರಾಜ್ಯ ಸರ್ಕಾರವು ಬಿಬಿಎಂಪಿಯನ್ನು ಪುನರ್ ರಚಿಸಿ ಗ್ರೇಟರ್ ಬೆಂಗಳೂರು ಪ್ರಾಧಿಕಾರವನ್ನು ರಚಿಸಿದಂತೆ, ಬೆಂಗಳೂರು ನಗರದಲ್ಲಿ ವಾಹನ ಸಂಚಾರ ದಟ್ಟಣೆ, ಕಾನೂನು ಮತ್ತು ಸುವ್ಯವಸ್ಥೆಯ ಪ್ರಕರಣಗಳು ಹಾಗೆಯೇ ಕ್ರಿಮಿನಲ್ ಪ್ರಕರಣಗಳಂತ ಸಮಸ್ಯೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಹಾಗೂ ಇಂತಹುದೆ ಸಮಸ್ಯೆಗಳಿಗೆ ಪರಿಹಾರ ರೂಪವಾಗಿ ದೇಶದ ಇತರ ದೊಡ್ಡ ದೊಡ್ಡ ನಗರಗಳಲ್ಲಿ ಪೊಲೀಸ್ ಆಯುಕ್ತರ ಸಂಖ್ಯೆಯನ್ನು ಹೆಚ್ಚಿಸಿರುವುದರ ಹಿನ್ನೆಲೆಯಲ್ಲಿಯೂ, ಬೆಂಗಳೂರು ಪೊಲೀಸ್ ಕಮಿಷನರೇಟನ್ನು ಸಹ ಪುನರ್ ರಚಿಸಿ ಪೊಲೀಸ್ ಆಯುಕ್ತರ ಮತ್ತೊಂದು ಹುದ್ದೆಯನ್ನು ಇನ್ನಿತರ ಪೂರಕ ಹುದ್ದೆಗಳೊಂದಿಗೆ ಹೊಸದಾಗಿ ಸೃಜಿಸಿ ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸುವ ಅವಶ್ಯಕತೆ ಖಂಡಿತವಾಗಿಯೂ ಇರುವುದನ್ನು ಸರ್ಕಾರವು ಮನಗಂಡು ಈ ನಿಟ್ಟಿನಲ್ಲಿ ಶೀಘ್ರ ಕ್ರಮ ವಹಿಸಬೇಕಾದ ತುರ್ತು ಇರುವ ಸಾರ್ವಜನಿಕ ಮಹತ್ವದ ವಿಷಯವನ್ನು ನಿಯಮ-330 ರಡಿಯಲ್ಲಿ ಪ್ರಸ್ತಾಪಿಸಲು ಅನುಮತಿಸಬೇಕೆಂದು ಕೋರುತ್ತೇನೆ.**

**<u>ಉತ್ತರ:</u>**

ಬೆಂಗಳೂರು ನಗರದಲ್ಲಿನ ಅಪರಾಧ, ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರ ನಿರ್ವಹಣೆ ಕರ್ತವ್ಯಗಳನ್ನು ಬೆಂಗಳೂರು ನಗರ ಪೊಲೀಸ್ ಆಯುಕ್ತರ ಅಧೀನದಲ್ಲಿ 01-ಅಪರ ಪೊಲೀಸ್ ಆಯುಕ್ತರು ಅಪರಾಧ, 02-ಜಂಟಿ ಪೊಲೀಸ್ ಆಯುಕ್ತರು ಕಾನೂನು ಮತ್ತು ಸುವ್ಯವಸ್ಥೆ ಹಾಗೂ 01-ಜಂಟಿ ಪೊಲೀಸ್ ಆಯುಕ್ತರು ಸಂಚಾರ ರವರುಗಳ ಮೇಲುಸ್ತುವಾರಿಯಲ್ಲಿ 11-ಡಿ.ಸಿ.ಪಿ. (ಕಾನೂನು ಮತ್ತು ಸುವ್ಯವಸ್ಥೆ), 04-ಡಿ.ಸಿ.ಪಿ. (ಸಂಚಾರ) ಮತ್ತು 02-ಡಿ.ಸಿ.ಪಿ. (ಅಪರಾಧ) ವೃಂದದ ಅಧಿಕಾರಿಗಳಿಂದ ಸಮರ್ಪಕವಾಗಿ ನಿರ್ವಹಿಸಲಾಗುತ್ತಿದೆ. ಬೆಂಗಳೂರು ಪೊಲೀಸ್ ಆಯುಕ್ತಾಲಯವನ್ನು ಪುನರ್ ರಚಿಸುವ ಬಗ್ಗೆ ಮಾನ್ಯ ಗೃಹ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ: 24/12/2025ರಂದು ಜರುಗಿದ ಸಭೆಯಲ್ಲಿ ಚರ್ಚಿಸಲಾಗಿದೆ. ಅದರಂತೆ ಪುನರ್-ರಚನೆ ವಿಷಯವು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.

**ಸಂಖ್ಯೆ: ಹೆಚ್‌ಡಿ 46 ಪಿಓಪಿ 2026**

**(ಡಾ|| ಜಿ.ಪರಮೇಶ್ವರ)**
ಗೃಹ ಸಚಿವರು.